ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

8

ಇಲಾಖೆ / ವಿಷಯ : DEPARTMENT / SUBJECT: ರಾಜ್ಯಸಭೆ ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE: 5/11/20

# ರಾಜ್ಯಸಭೆಗೆ ಬಿಜೆಪಿ ಅಭ್ಯರ್ಥಿ ನಾರಾಯಣ ಅವಿರೋಧ ಆಯ್ಕೆ

**ಬೆಂಗಳೂರು:** ಅಶೋಕ್ ಗಸ್ತಿ ನಿಧನದಿಂದ ತೆರವಾದ ರಾಜ್ಯಸಭಾ ಸ್ಥಾನಕ್ಕೆ ಬಿಜೆಪಿ ಅಭ್ಯರ್ಥಿಯಾಗಿ ಕೆ.ನಾರಾಯಣ ನಾಮಪತ್ರ ಸಲ್ಲಿಸಿದ್ದಾರೆ. ನಾಮಪತ್ರ ಸಲ್ಲಿಕೆಗೆ ಬುಧವಾರ ಕೊನೆಯ ದಿನವಾಗಿತ್ತು. ಈ ವರೆಗೆ ಬೇರೆ ಯಾವ ನಾಮಪತ್ರವೂ ಸಲ್ಲಿಕೆಯಾಗದಿರುವುದರಿಂದ ನಾರಾಯಣ ಅವರು ಅವಿರೋಧ ಆಯ್ಕೆಯಾಗುವುದು ಖಚಿತ.

ವಿವರ ➘ 7

# ರಾಜ್ಯಸಭೆಗೆ ನಾರಾಯಣ ಅವಿರೋಧ ಆಯ್ಕೆ

## ಕಾಂಗ್ರೆಸ್, ಜೆಡಿಎಸ್‌ನಿಂದ ಅಭ್ಯರ್ಥಿ ಇಲ್ಲ | ಬಿಜೆಪಿ ಅಭ್ಯರ್ಥಿ ಅವಿರೋಧ ಆಯ್ಕೆ ಖಚಿತ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಅಶೋಕ್ ಗಸ್ತಿ ನಿಧನದಿಂದ ತೆರವಾದ ರಾಜ್ಯಸಭೆಯ ಒಂದು ಸ್ಥಾನಕ್ಕೆ ಬಿಜೆಪಿ ಅಭ್ಯರ್ಥಿಯಾಗಿ ಕೆ.ನಾರಾಯಣ ಬುಧವಾರ ನಾಮಪತ್ರ ಸಲ್ಲಿಸಿದ್ದಾರೆ. ಪ್ರತಿಪಕ್ಷ ಕಾಂಗ್ರೆಸ್ ಮತ್ತು ಜೆಡಿಎಸ್‌ನಿಂದ ಯಾವೊಬ್ಬ ಅಭ್ಯರ್ಥಿಯೂ ಕಣಕ್ಕೆ ಇಳಿಯದಿರುವುದರಿಂದ ನಾರಾಯಣ ಅವಿರೋಧ ಆಯ್ಕೆಯಾಗುವುದು ಖಚಿತವಾಗಿದೆ.

ಚುನಾವಣಾಧಿಕಾರಿಯಾಗಿರುವ ವಿಧಾನಸಭೆ ಕಾರ್ಯದರ್ಶಿ ವಿಶಾಲಾಕ್ಷಿ ಅವರಿಗೆ ಬುಧವಾರ ನಾರಾಯಣ್ ತಮ್ಮ ನಾಮಪತ್ರ ಸಲ್ಲಿಸಿದರು.

ಈ ವೇಳೆ ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸೇರಿದಂತೆ ಇತರೆ ಮುಖಂಡರು ಸಾಥ್ ನೀಡಿದರು. ರಾಜ್ಯಸಭೆಯ ಒಂದು ಸ್ಥಾನಕ್ಕೆ ಬಿಜೆಪಿಯ ಅಧಿಕೃತ ಅಭ್ಯರ್ಥಿಯಾಗಿ ಕೆ. ನಾರಾಯಣ ನಾಮಪತ್ರ ಸಲ್ಲಿಸಿದ್ದಾರೆ.



ಬಿಜೆಪಿ ಅಭ್ಯರ್ಥಿ ಕೆ.ನಾರಾಯಣ ಬುಧವಾರ ನಾಮಪತ್ರ ಸಲ್ಲಿಸಿದರು.

ಇವರಲ್ಲದೆ ಪಕ್ಷೇತರ ಅಭ್ಯರ್ಥಿಯಾಗಿ ಸುಧಾಕರ್ ಎಂಬುವರು ಉಮೇದುವಾರಿಕೆ ಸಲ್ಲಿಕೆ ಮಾಡಿದ್ದಾರೆ. ನಾಮಪತ್ರದಲ್ಲಿ ಬಿಜೆಪಿ ಸದಸ್ಯರೆಂದು ನಮೂದಿಸಿರುವ ಸುಧಾಕರ್, ಲಿಂಗಸುಗೂರು ಗ್ರಾಮ ಪಂಚಾಯತಿಯ ಮಾಜಿ ಸದಸ್ಯರಾಗಿದ್ದಾರೆ. ಸುಧಾಕರ್ ಅವರಿಗೆ ಯಾರೊಬ್ಬರೂ ಸೂಚಕರು ಇಲ್ಲದ ಕಾರಣ ನಾಮಪತ್ರ ತಿರಸ್ಕೃತವಾಗುವ ಸಾಧ್ಯತೆ ಹೆಚ್ಚಿದೆ.